ಪ್ರ-330-(31)

**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಪುಟ್ಟಣ್ಣ ಮತ್ತು ಶ್ರೀ ಮರಿತಿಬ್ಬೇಗೌಡ ಇವರುಗಳು ನಿಯಮ 330 ರ ಅಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರಿಸುವ ಕುರಿತು.**

## ವಿಷಯ

1995 ರಿಂದ 2005 ನೇ ಸಾಲಿನವರೆಗೆ ಪ್ರಾರಂಭವಾಗಿರುವ ಅನುದಾನ ರಹಿತ ಕನ್ನಡ ಮಾಧ್ಯಮ ಶಾಲಾ ಕಾಲೇಜುಗಳು ಬೋಧಕ/ಬೋಧಕೇತರರಿಗೆ ವೇತನಾನುದಾನ ನೀಡದಿರುವುದರಿಂದ ತುಂಬಾ ತೊಂದರೆಯಲ್ಲಿದ್ದಾರೆ. ಅನುದಾನ ರಹಿತ ಕನ್ನಡ ಮಾಧ್ಯಮ ಶಾಲಾ ಕಾಲೇಜುಗಳಲ್ಲಿ ಉತ್ತಮ ಫಲಿತಾಂಶ ಬರುತ್ತಿದ್ದು, ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ದೊರೆಯುತ್ತಿದೆ. ಅತ್ಯಂತ ಕಡಿಮೆ ಗೌರವಧನಕ್ಕೆ ಬೋಧಕ/ಬೊಧಕೇತರರು ಕಾರ್ಯನಿರ್ವಹಿಸುತ್ತಿದ್ದಾರೆ. ಇವರಿಗೆ ಸೇವಾ ಭದ್ರತೆ ಇರುವುದಿಲ್ಲ. ಆದಕಾರಣ 1995 ರಿಂದ 2005ನೇ ಸಾಲಿನವರೆಗೆ ಪ್ರಾರಂಭವಾಗಿರುವ ಕನ್ನಡ ಮಾಧ್ಯಮ ಶಾಲಾ ಕಾಲೇಜುಗಳ ಬೋಧಕ/ಬೋಧಕೇತರರಿಗೆ ವೇತನಾನುದಾನ ನೀಡಬೇಕೆಂದು ಮತ್ತು ಸದರಿ ಶಾಲಾ ಕಾಲೇಜುಗಳಲ್ಲಿ ಅಭ್ಯಾಸ ಮಾಡುತ್ತಿರುವ ಎಲ್ಲಾ ಬಡ ಮಕ್ಕಳಿಗೂ ಸರ್ಕಾರಿ ಶಾಲೆಗಳಲ್ಲಿನ ಮಕ್ಕಳಿಗೆ ಸಿಗುವಂತಹ ಉಚಿತ ಸೌಲಭ್ಯಗಳನ್ನು ವಿಸ್ತರಿಸುವ ಬಗ್ಗೆ.

## ಉತ್ತರ

ಸರ್ಕಾರದ ಆದೇಶ ಸಂಖ್ಯೆ:ಇಡಿ 59 ಪಿಎಂಸಿ 2006, ದಿನಾಂಕ:06.10.2007ರನ್ವಯ ದಿನಾಂಕ:01.06.1987 ರಿಂದ 1992–93ನೇ ಶೈಕ್ಷಣಿಕ ಸಾಲಿನಲ್ಲಿ ಪ್ರಾರಂಭಿಸಿ ಸತತವಾಗಿ ನಡೆಸುತ್ತಿರುವ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳನ್ನು ಆದೇಶ ಸಂಖ್ಯೆ:ಇಡಿ 217 ಪಿಎಂಸಿ 2008, ದಿನಾಂಕ:08.09.2008ರನ್ವಯ 1993–94 ಮತ್ತು 1994–95ನೇ ಶೈಕ್ಷಣಿಕ ಸಾಲುಗಳ ಅವಧಿಯಲ್ಲಿ ಪ್ರಾರಂಭಿಸಿ ವಿಚ್ಛಿನ್ನತೆ ಇಲ್ಲದೆ ನಡೆಸಲಾಗುತ್ತಿರುವ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳನ್ನು ಸಹಾಯಾನುದಾನಕ್ಕೆ ಒಳಪಡಿಸಲು ಆದೇಶಿಸಲಾಗಿದೆ.

ಖಾಸಗಿ ಅನುದಾನರಹಿತ ಶಾಲಾ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕರು/ಉಪನ್ಯಾಸಕರುಗಳಿಗೆ ಆ ಹುದ್ದೆಯ ಕನಿಷ್ಠ ವೇತನವನ್ನು ಪಾವತಿಸಲು ಕರ್ನಾಟಕ ಶಿಕ್ಷಣ ಕಾಯ್ದೆ 1983ರ ಸೆಕ್ಷನ್ 89ರಡಿ 1999ರಲ್ಲಿ ನಿಯಮಗಳನ್ನು ರೂಪಿಸಲಾಗಿದ್ದು, ಅದರಂತೆ ಕನಿಷ್ಠ ವೇತನವನ್ನು ನೀಡಬೇಕಾಗಿರುತ್ತದೆ.

ಮುಂದುವರೆದು, 1995 ರಿಂದ 2005ನೇ ಸಾಲಿನವರೆಗೆ ಪ್ರಾರಂಭವಾಗಿರುವ ಅನುದಾನರಹಿತ ಕನ್ನಡ ಮಾಧ್ಯಮ ಶಾಲಾ ಕಾಲೇಜುಗಳು ಬೋಧಕ/ಬೋಧಕೇತರರಿಗೆ ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ:ಆಇ.157 ವೆಚ್ಚ–8/2020, ದಿನಾಂಕ:10.06.2020ರಂತೆ ತಾತ್ಕಾಲಿಕವಾಗಿ ವೇತನಾನುದಾನಕ್ಕೆ ಒಳಪಡಿಸುವ ಪ್ರಕ್ರಿಯೆಯನ್ನು ತಡೆಹಿಡಿಯಲಾಗಿರುತ್ತದೆ.

—2

ಪ್ರಸ್ತುತ ಆರ್ಥಿಕ ಮಿತವ್ಯಯ ಜಾರಿಯಲ್ಲಿರುವುದರಿಂದ ಸದರಿ ಶಾಲಾ ಕಾಲೇಜುಗಳಲ್ಲಿ ಅಭ್ಯಾಸ ಮಾಡುತ್ತಿರುವ ಎಲ್ಲಾ ಬಡ ಮಕ್ಕಳಿಗೂ ಸರ್ಕಾರಿ ಶಾಲೆಯಲ್ಲಿನ ಮಕ್ಕಳಿಗೆ ಸಿಗುವಂತಹ ಉಚಿತ ಸೌಲಭ್ಯಗಳನ್ನು ವಿಸ್ತರಿಸಲು ಕೋವಿಡ್-19ರ ಹಿನ್ನೆಲೆಯಲ್ಲಿ ಸಧ್ಯದ ಪರಿಸ್ಥಿತಿಯಲ್ಲಿ ಸಾಧ್ಯವಿಲ್ಲ.

**ಇಪಿ 23 ಪಿಎಂಸಿ 2021**

[ಎಸ್.ಸುರೇಶ್ ಕುಮಾರ್]
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ
ಸಕಾಲ ಸಚಿವರು.